All India Radio: Bangalore
National Bulletin In Kannada
11.12.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಮಣಿಪುರಕ್ಕೆ ಇಂದಿನಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಎರಡು ದಿನಗಳ ಭೇಟಿ
2. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ
3. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ; ಬೂತ್‌ಮಟ್ಟದ ಏಜೆಂಟ್‌ಗಳೊಂದಿಗೆ ಮತದಾರರ ಪಟ್ಟಿ ಹಂಚಿಕೊಳ್ಳುವಂತೆ ಅಧಿಕಾರಿಗಳಿಗೆ ಚುನಾವಣಾ ಆಯೋಗ ಸೂಚನೆ
4. ಟಿ-೨೦ ಕ್ರಿಕೆಟ್ ; ಸರಣಿಯ ೨ನೇ ಪಂದ್ಯದಲ್ಲಿಂದು ಭಾರತ-ದಕ್ಷಿಣ ಆಫ್ರಿಕಾ ಮುಖಾಮುಖಿ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಣಿಪುರಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಇಂದು, ರಾಷ್ಟ್ರಪತಿಗಳು ಇಂಫಾಲ್‌ಗೆ ಆಗಮಿಸಲಿದ್ದಾರೆ. ಈ ವೇಳೆ ಅವರು ಸಾಂಪ್ರದಾಯಿಕ ಗೌರವ ರಕ್ಷೆ ಸ್ವೀಕರಿಸಲಿದ್ದಾರೆ. ನಂತರ ಅವರು ಐತಿಹಾಸಿಕ ಮಾಪಲ್ ಕಾಂಗ್ಜೀಬಂಗ್‌ಗೆ ಭೇಟಿ ನೀಡಿ, ರಾಜ್ಯದ ಶ್ರೀಮಂತ ಕ್ರೀಡಾ ಪರಂಪರೆಯನ್ನು ಆಚರಿಸುವ ಪೋಲೋ ಪ್ರದರ್ಶನ ಪಂದ್ಯವನ್ನು ವೀಕ್ಷಿಸಲಿದ್ದಾರೆ. ಸಂಜೆ, ರಾಷ್ಟ್ರಪತಿಗಳು, ಇಂಫಾಲ್‌ನ ಸಿಟಿ ಕನ್ವೆನ್ಷನ್ ಸೆಂಟರ್‌ನಲ್ಲಿ ಮಣಿಪುರ ಸರ್ಕಾರ ಆಯೋಜಿಸಿರುವ ನಾಗರಿಕ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಪ್ರಾದೇಶಿಕ ಪ್ರಗತಿಯ ಮೇಲೆ ಸರ್ಕಾರ ನಿರಂತರ ಗಮನ ಹರಿಸುತ್ತಿರುವುದನ್ನು ಸೂಚಿಸುವ ಹಲವಾರು ಪ್ರಮುಖ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ನಾಳೆ, ರಾಷ್ಟ್ರಪತಿಗಳು ಮಣಿಪುರದ ಧೈರ್ಯಶಾಲಿ ಮಹಿಳಾ ಯೋಧರಿಗೆ ಗೌರವ ಸಲ್ಲಿಸಲು ಇಂಫಾಲ್‌ನಲ್ಲಿರುವ ನೂಪಿ ಲಾಲ್ ಸ್ಮಾರಕ ಸಂಕೀರ್ಣಕ್ಕೆ ಭೇಟಿ ನೀಡಲಿದ್ದಾರೆ. ನಂತರ ಅವರು ಸೇನಾಪತಿಗೆ ತೆರಳಲಿದ್ದಾರೆ. ಅಲ್ಲಿ ಅವರು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ಜಿಲ್ಲೆಯ ಅಭಿವೃದ್ಧಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ವಿವಿಧ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ದೂರವಾಣಿ ಕರೆ ಮಾಡಿ ಮಾತನಾಡಿದರು. ಸಂಭಾಷಣೆಯ ಸಮಯದಲ್ಲಿ, ಇಬ್ಬರೂ ನಾಯಕರು, ಭಾರತ-ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯಲ್ಲಿನ ಮುಂದುವರಿದ ಆವೇಗದ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು ಮತ್ತು ಪರಸ್ಪರ ಪ್ರಯೋಜನಗಳಿಗಾಗಿ ಈ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಇಬ್ಬರು ನಾಯಕರು ಭಯೋತ್ಪಾದನೆಯನ್ನು ಬಲವಾಗಿ ಖಂಡಿಸಿದರು ಮತ್ತು ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಭಯೋತ್ಪಾದನೆಯ ಬಗ್ಗೆ ತಮ್ಮ ಶೂನ್ಯ-ಸಹಿಷ್ಣುತೆಯನ್ನು ಪುನರುಚ್ಚರಿಸಿದರು. ಪಶ್ಚಿಮ ಏಷ್ಯಾದ ಪರಿಸ್ಥಿತಿಯ ಬಗ್ಗೆಯೂ ಅವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಗಾಜಾ ಶಾಂತಿ ಯೋಜನೆಯ ಆರಂಭಿಕ ಅನುಷ್ಠಾನ ಸೇರಿದಂತೆ ಈ ಪ್ರದೇಶದಲ್ಲಿ ನ್ಯಾಯಯುತ ಮತ್ತು ಶಾಶ್ವತ ಶಾಂತಿಗಾಗಿ ಪ್ರಯತ್ನಗಳಿಗೆ ಭಾರತದ ಬೆಂಬಲವನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದರು ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ.

<><><>

ರಾಷ್ಟ್ರೀಯ ಗೀತೆ "ವಂದೇ ಮಾತರಂ"ನ ೧೫೦ ನೇ ವಾರ್ಷಿಕೋತ್ಸವದ ಕುರಿತು ರಾಜ್ಯಸಭೆ ಇಂದು ಚರ್ಚೆಯನ್ನು ಮುಂದುವರಿಸಲಿದೆ. ಕೇಂದ್ರ ಸಚಿವ ಮತ್ತು ಸದನದ ನಾಯಕ ಜೆ.ಪಿ.ನಡ್ಡಾ ಅವರ ಭಾಷಣದೊಂದಿಗೆ ಚರ್ಚೆ ಮುಕ್ತಾಯಗೊಳ್ಳಲಿದೆ. ಇದರ ನಂತರ, ರಾಜ್ಯಸಭೆಯು ಚುನಾವಣಾ ಸುಧಾರಣೆಗಳ ಕುರಿತು ಚರ್ಚೆಯನ್ನು ಪ್ರಾರಂಭಿಸಲಿದೆ.

<><><>

ಭಾರತೀಯ ಚುನಾವಣಾ ಆಯೋಗ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಯುತ್ತಿರುವ ಎಲ್ಲಾ ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳನ್ನು, ಬೂತ್ ಮಟ್ಟದ ಏಜೆಂಟ್‌ಗಳೊಂದಿಗೆ ಮತದಾರರ ಪಟ್ಟಿಗಳ ಹಂಚಿಕೆಯನ್ನು ಖಚಿತಪಡಿಸಿಕೊಳ್ಳಲು ಕೇಳಿದೆ. ಬಿಹಾರದಲ್ಲಿ  ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಂತೆ, ಗೈರುಹಾಜರಿ, ಸ್ಥಳಾಂತರಗೊಂಡ, ಮೃತಪಟ್ಟ ಅಥವಾ ನಕಲು ಎಂದು ಗುರುತಿಸಲಾದ ಮತದಾರರ ಪಟ್ಟಿಗಳನ್ನು ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟ್‌ಗಳೊಂದಿಗೆ ಹಂಚಿಕೊಳ್ಳಲಾಗುವುದು ಎಂದು ಚುನಾವಣಾ ಆಯೋಗ ತಿಳಿಸಿದೆ. ಬೂತ್

ಮಟ್ಟದ ಅಧಿಕಾರಿಗಳು, ಮೂರು ಅಥವಾ ಹೆಚ್ಚಿನ ಭೇಟಿಗಳ ನಂತರವೂ ಸಂಪರ್ಕಿಸಲು ಸಾಧ್ಯವಾಗದ ಮತದಾರರ ಹೆಸರುಗಳನ್ನು ಸಹ ಪಟ್ಟಿಯಲ್ಲಿ ಸೇರಿಸಲಾಗುವುದು. ಕರಡು ಮತದಾರರ ಪಟ್ಟಿಯ ಪ್ರಕಟಣೆಯ ಮೊದಲು, ರಾಜಕೀಯ ಪಕ್ಷಗಳ ಜಿಲ್ಲಾಧ್ಯಕ್ಷರು, ನಾಮನಿರ್ದೇಶನ ಮಾಡಿದ ಬೂತ್ ಮಟ್ಟದ ಏಜೆಂಟ್‌ಗಳಿಗೆ ಪಟ್ಟಿಗಳನ್ನು ಒದಗಿಸಲಾಗುವುದು. ಆಯಾ ಮುಖ್ಯ ಚುನಾವಣಾ ಅಧಿಕಾರಿಗಳು ಈ ಪಟ್ಟಿಗಳ ಸಕಾಲಿಕ ಹಂಚಿಕೆಯನ್ನು ಖಚಿತಪಡಿಸಿಕೊಳ್ಳುತ್ತಾರೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಸುಮಾರು ಐದು ಲಕ್ಷ ಬೂತ್ ಮಟ್ಟದ ಅಧಿಕಾರಿಗಳು, ಹನ್ನೆರಡು ಲಕ್ಷಕ್ಕೂ ಹೆಚ್ಚು ಬೂತ್ ಮಟ್ಟದ ಏಜೆಂಟ್‌ಗಳೊಂದಿಗೆ ಬೂತ್ ಮಟ್ಟದ ಸಭೆಗಳನ್ನು ನಡೆಸುತ್ತಾರೆ. ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದ ನಂತರ, ಈ ಪಟ್ಟಿಗಳನ್ನು ಮುಖ್ಯ ಚುನಾವಣಾ ಅಧಿಕಾರಿಗಳು ಮತ್ತು ಜಿಲ್ಲಾ ಚುನಾವಣಾ ಅಧಿಕಾರಿಗಳ ವೆಬ್‌ಸೈಟ್‌ಗಳಲ್ಲಿ ಅಪ್‌ಲೋಡ್ ಮಾಡಲಾಗುತ್ತದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

<><><><>

ವ್ಯಾಪಕ ವಿಮಾನ ರದ್ದತಿ ಮತ್ತು ವಿಳಂಬದ ನಂತರ, ನಾಗರಿಕ ವಿಮಾನಯಾನ ನಿರ್ದೇಶನಾಲಯ, ಗುರುಗ್ರಾಮದಲ್ಲಿರುವ ಇಂಡಿಗೋ ಕಾರ್ಪೊರೇಟ್ ಕಚೇರಿಯಲ್ಲಿ, ಮೀಸಲಾದ ಮೇಲ್ವಿಚಾರಣಾ ತಂಡವನ್ನು ಸ್ಥಾಪಿಸಿದೆ. ವಿಮಾನ ವಿಳಂಬ ಮತ್ತು ರದ್ದತಿಯಿಂದ ಉಂಟಾಗುವ ಪ್ರಯಾಣಿಕರ ಅನಾನುಕೂಲತೆಯನ್ನು ಪರಿಹರಿಸುವುದು ಈ ಕ್ರಮದ ಗುರಿಯಾಗಿದೆ ಎಂದು ನಿರ್ದೇಶನಾಲಯ ತಿಳಿಸಿದೆ. ಡೆಪ್ಯೂಟಿ ಚೀಫ್ ಫ್ಲೈಟ್ ಆಪರೇಷನ್ಸ್ ಇನ್ಸ್‌ಪೆಕ್ಟರ್ ಕ್ಯಾಪ್ಟನ್ ವಿಕ್ರಮ್ ಶರ್ಮಾ ನೇತೃತ್ವದ ಎಂಟು ಸದಸ್ಯರ ತಂಡ, ವಿಮಾನಗಳ ಸಂಖ್ಯಾ ಬಲ, ಸಿಬ್ಬಂದಿ ಲಭ್ಯತೆ, ಬಳಕೆಯ ಸಮಯ, ಯೋಜಿತವಲ್ಲದ ರಜೆಗಳು ಹಾಗೂ ಕಾಕ್‌ಪಿಟ್ ಮತ್ತು ಕ್ಯಾಬಿನ್ ಸಿಬ್ಬಂದಿ ಇಬ್ಬರಿಗೂ ಮೀಸಲು ಸಿಬ್ಬಂದಿ ಸೇರಿದಂತೆ ಪ್ರಮುಖ ಕಾರ್ಯಾಚರಣೆಯ ಕ್ಷೇತ್ರಗಳನ್ನು ಮೇಲ್ವಿಚಾರಣೆ ಮಾಡುತ್ತದೆ. ಇಬ್ಬರು ಸದಸ್ಯರು ಪಾಳಿ ಆಧಾರದಲ್ಲಿ ವಿಮಾನಯಾನ ಕಚೇರಿಯಲ್ಲಿ ನೆಲೆಸಿರುತ್ತಾರೆ.

ಅಲ್ಲದೆ, ಇನ್ನಿಬ್ಬರು ಅಧಿಕಾರಿಗಳು, ದೈನಂದಿನ ವಿಮಾನ ರದ್ದತಿ, ಮರುಪಾವತಿ ಪ್ರಕ್ರಿಯೆ, ಸಮಯಕ್ಕೆ ಸರಿಯಾಗಿ ಕಾರ್ಯನಿರ್ವಣೆ, ಪ್ರಯಾಣಿಕರ ಪರಿಹಾರ ಮತ್ತು ಸಾಮಾನು ವಿತರಣೆಯನ್ನು ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದು ನಿರ್ದೇಶನಾಲಯ ಮಾಹಿತಿ ನೀಡಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ವಿದೇಶ ಪ್ರವಾಸಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರು ನೀಡಿರುವ ಹೇಳಿಕೆಗಳನ್ನು ಬಿಜೆಪಿ ಟೀಕಿಸಿದೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ, ಈ ಹೇಳಿಕೆಗಳನ್ನು ಖಂಡನೀಯ. ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕೃತ ಭೇಟಿಗಾಗಿ ಮತ್ತು ರಾಷ್ಟ್ರದ ಕೆಲಸಕ್ಕಾಗಿ ವಿದೇಶಕ್ಕೆ ಹೋಗುತ್ತಾರೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಪ್ರತಿ ಸಂಸತ್ತಿನ ಅಧಿವೇಶನದ ನಂತರ ರಜೆಯ ನಿಮಿತ್ತ ವಿದೇಶಕ್ಕೆ ಹೋಗುತ್ತಾರೆ ಎಂದು ದೂರಿದ್ದಾರೆ. ದೀರ್ಘಕಾಲ ಅಧಿಕಾರದಲ್ಲಿದ್ದ ಕಾಂಗ್ರೆಸ್, ಕರ್ತವ್ಯದ ಹಿನ್ನೆಲೆಯಲ್ಲಿ ವಿದೇಶಕ್ಕೆ ಭೇಟಿ ಮತ್ತು ರಜೆಯ ಹಿನ್ನೆಲೆಯಲ್ಲಿ ವಿದೇಶಕ್ಕೆ ಭೇಟಿಯ ನಡುವಿನ ವ್ಯತ್ಯಾಸವನ್ನು ತಿಳಿದಿರಬೇಕು. ರಾಹುಲ್ ಗಾಂಧಿ ತಮ್ಮ ವಿದೇಶ ಭೇಟಿಯ ಸಮಯದಲ್ಲಿ ದೇಶದ ಪ್ರತಿಷ್ಠೆಯನ್ನು ಹಾಳು ಮಾಡಿದ್ದಾರೆ ಎಂದು ಸುಧಾಂಶು ತ್ರಿವೇದಿ ಆರೋಪಿಸಿದ್ದಾರೆ.

<><><><>

ಭಾರತ-ಇಟಲಿ ಪಾಲುದಾರಿಕೆಯು ಪ್ರಜಾಪ್ರಭುತ್ವ ಮೌಲ್ಯಗಳು ಹಾಗೂ ಸ್ಥಿರ, ಸುರಕ್ಷಿತ ಮತ್ತು ಸಮೃದ್ಧ ಜಗತ್ತಿಗೆ ಹಂಚಿಕೆಯ ಬದ್ಧತೆಯ ಮೇಲೆ ನಿರ್ಮಿಸಲ್ಪಟ್ಟಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ಇಟಲಿ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಆಂಟೋನಿಯೊ ತಜಾನಿ ಅವರೊಂದಿಗಿನ ಸಭೆಯಲ್ಲಿ ಡಾ. ಜೈಶಂಕರ್, ೨೦೨೫-೨೯ರ ಜಂಟಿ ಕಾರ್ಯತಂತ್ರದ ಕ್ರಿಯಾ ಯೋಜನೆಯೊಂದಿಗೆ ಎರಡೂ ದೇಶಗಳು ಮುಂದುವರಿಯುತ್ತಿವೆ. ರಾಜಕೀಯ ಸಹಕಾರ, ರಕ್ಷಣೆ, ಕಡಲ ಭದ್ರತೆ, ಬಾಹ್ಯಾಕಾಶ, ಸಂಸ್ಕೃತಿ, ನಿರ್ಣಾಯಕ ತಂತ್ರಜ್ಞಾನಗಳು ಮತ್ತು ಜನರಿಂದ ಜನರ ನಡುವಿನ ಸಂಬಂಧಗಳ ಕುರಿತು ಚರ್ಚೆಗಳನ್ನು ಎರಡೂ ಕಡೆಯವರು ಎದುರು ನೋಡುತ್ತಿದ್ದಾರೆ ಎಂದು ತಿಳಿಸಿದರು.

<><><>

ಏಷ್ಯನ್ ಅಭಿವೃದ್ಧಿ ಬ್ಯಾಂಕ್-ಎಡಿಬಿ ೨೦೨೫-೨೬ರ ಹಣಕಾಸು ವರ್ಷದಲ್ಲಿ ಭಾರತದ ಬೆಳವಣಿಗೆ ಅಂದಾಜನ್ನು ಶೇಕಡಾ ೬.೫ ರಿಂದ ಶೇಕಡಾ ೭.೨ ಕ್ಕೆ ಹೆಚ್ಚಿಸಿದೆ. ಎಡಿಬಿಯ ಏಷ್ಯಾ ಮತ್ತು ಪೆಸಿಫಿಕ್ ಬೆಳವಣಿಗೆಯ ಮುನ್ನೋಟ ವರದಿಯ ಪ್ರಕಾರ, ಜುಲೈ-ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ದೇಶವು ಸಕಾರಾತ್ಮಕ ಬೆಳವಣಿಗೆಯನ್ನು ದಾಖಲಿಸಿದ ನಂತರ ಮತ್ತು ಹಣಕಾಸು ವರ್ಷದ ನಿರೀಕ್ಷೆಗಳನ್ನು ಇದು ಶೇಕಡಾ ೦.೭ ರಷ್ಟು ಹೆಚ್ಚಿಸಿದೆ.

<><><>

ಭಯೋತ್ಪಾದನೆ ಮತ್ತು ಅಂತಾರಾಷ್ಟ್ರೀಯ ಅಪರಾಧಗಳ ವಿರುದ್ಧ ಸಹಕಾರವನ್ನು ಬಲಪಡಿಸುವ ಬದ್ಧತೆಯನ್ನು ಭಾರತ ಮತ್ತು ಮಲೇಷ್ಯಾ ಪುನರುಚ್ಚರಿಸಿವೆ. ಭಯೋತ್ಪಾದನೆ ನಿಗ್ರಹ ಮತ್ತು ಅಂತಾರಾಷ್ಟ್ರೀಯ ಅಪರಾಧಗಳ ವಿರುದ್ಧದ ಹೋರಾಟದ ಕುರಿತಾದ ಭಾರತ-ಮಲೇಷ್ಯಾ ಜಂಟಿ ಕಾರ್ಯಕಾರಿ ಗುಂಪಿನ ಮೂರನೇ ಸಭೆಯಲ್ಲಿ, ಪ್ರಾದೇಶಿಕ ಮತ್ತು ಜಾಗತಿಕ ಭಯೋತ್ಪಾದನಾ ವಿಷಯದ ಕುರಿತು ಉಭಯ ಕಡೆಯವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ವಿಶ್ವಸಂಸ್ಥೆ, ಹಣಕಾಸು ಕ್ರಿಯಾ ಕಾರ್ಯಪಡೆ, ಹಣ ಅಕ್ರಮ ವರ್ಗಾವಣೆಯ ಏಷ್ಯಾ-ಪೆಸಿಫಿಕ್ ಗುಂಪು, ಮತ್ತು ಆಸಿಯಾನ್ ಪ್ರಾದೇಶಿಕ ವೇದಿಕೆ ಸೇರಿದಂತೆ ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರವನ್ನು ಹೆಚ್ಚಿಸುವ ತಮ್ಮ ಬದ್ಧತೆಯನ್ನು ಎರಡು ಕಡೆಯವರು ಪುನರುಚ್ಚರಿಸಿದರು. ಈ ಒಪ್ಪಂದದ ಭಾಗವಾಗಿ, ದ್ವಿಪಕ್ಷೀಯ ಸಾಮರ್ಥ್ಯ ವೃದ್ಧಿ ಕ್ರಮಗಳಿಗೆ ಮಾರ್ಗಗಳನ್ನು ಅನ್ವೇಷಿಸಲು ಮಲೇಷ್ಯಾ ನಿಯೋಗವು ಇಂದು ರಾಷ್ಟ್ರೀಯ ಭದ್ರತಾ ಪಡೆಯ ಪ್ರಧಾನ ಕಚೇರಿಗೆ ಭೇಟಿ ನೀಡಲಿದೆ.

ಭಾರತ ಮತ್ತು ಮಲೇಷ್ಯಾ, ಜಂಟಿ ಕಾರ್ಯಪಡೆಯ ಮುಂದಿನ ಸುತ್ತಿನ ಚರ್ಚೆಯನ್ನು ಕೌಲಾಲಂಪುರದಲ್ಲಿ ಪರಸ್ಪರ ಅನುಕೂಲಕರ ದಿನಾಂಕದಂದು ನಡೆಸಲು ಒಪ್ಪಿಕೊಂಡಿವೆ.

<><><>

ನವ ಚಂಡೀಗಢದ ಮುಲ್ಲನ್‌ಪುರದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ಭಾರತ ಮತ್ತು ದಕ್ಷಿಣ ಆಫ್ರಿಕಾ ಎರಡನೇ ಟಿ-೨೦ ಪಂದ್ಯ ನಡೆಯಲಿದೆ. ಪಂದ್ಯ ಸಂಜೆ ೭ಗಂಟೆಗೆ ಪ್ರಾರಂಭವಾಗಲಿದೆ. ಕಟಕ್‌ನ ಬಾರಾಬತಿ ಕ್ರೀಡಾಂಗಣದಲ್ಲಿ

ಮಂಗಳವಾರ ನಡೆದ ಐದು ಪಂದ್ಯಗಳ ಟಿ-೨೦ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ದಕ್ಷಿಣ ಆಫ್ರಿಕಾವನ್ನು ೧೦೧ ರನ್‌ಗಳಿಂದ ಸೋಲಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>